ಕರ್ನಾಟಕ ಸರ್ಕಾರ

## ಕಾಲೇಜು ಶಿಕ್ಷಣ ಇಲಾಖೆ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು-560001.
ದಿನಾಂಕ: 25.11.2021

ಸಂಖ್ಯೆ: ಕಾಶಿಇ/ಶೈವಿ/10/ಸುತ್ತೋಲೆ/2021-22

## ಸುತ್ತೋಲೆ

ವಿಷಯ: ಪ್ರತಿ ವರ್ಷದ ನವೆಂಬರ್ 26ನೇ ದಿನವನ್ನು ಸಂವಿಧಾನ ದಿನವನ್ನಾಗಿ ಆಚರಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಪತ್ರ ಸಂಖ್ಯೆ: ಇಡಿ 320 ಯುಎನ್ಇ 2021 ದಿನಾಂಕ:23.11.2021.

* * * * * *

ನಮ್ಮ ದೇಶದ ಸನ್ಮಾನ್ಯ ಪ್ರಧಾನ ಮಂತ್ರಿಯವರ ಆಶಯದಂತೆ "ಭಾರತದ ಸಂವಿಧಾನ"ವು ಭಾರತದ ಸಂವಿಧಾನ ಸಭೆಯಲ್ಲಿ ಅಂಗೀಕರಿಸಲ್ಪಟ್ಟ ದಿನವಾದ 26ನೇ ನವೆಂಬರ್ 1949ರ ನೆನಪಿಗಾಗಿ ಪ್ರತಿ ವರ್ಷದ ನವೆಂಬರ್ 26ರ ದಿನವನ್ನು ಸಂವಿಧಾನ ದಿವಸವಾಗಿ ಆಚರಿಸಬೇಕೆಂದು 11ನೇ ಅಕ್ಟೋಬರ್ 2015 ರಂದು ಘೋಷಿಸಿರುವ ಹಿನ್ನಲೆಯಲ್ಲಿ ಭಾರತದ ಸಂವಿಧಾನದ ಬಗ್ಗೆ ರಾಜ್ಯದ ಜನತೆಯಲ್ಲಿ ಅದರಲ್ಲಿಯೂ ಯುವ ಪೀಳಿಗೆಯಲ್ಲಿ ಅರಿವನ್ನು ಮೂಡಿಸಲು ಇನ್ನೂ ಹೆಚ್ಚಿನ ಪರಿಣಾಮಕಾರಿಯಾದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಉದ್ದೇಶದಿಂದ 26ನೇ ನವೆಂಬರ್ 2021 ರಂದು ಸಂವಿಧಾನದ ಪ್ರಸ್ತಾವನೆಯನ್ನು ಕಡ್ಡಾಯವಾಗಿ ಓದುವಂತೆ ಹಾಗೂ ಸಂವಿಧಾನದ ಬಗ್ಗೆ ಸಾರ್ವಜನಿಕವಾಗಿ ಅರಿವು ಮೂಡಿಸುವಂತಹ ಅತ್ಯುತ್ತಮ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವಂತೆ ಉಲ್ಲೇಖಿತ ಪತ್ರದಲ್ಲಿ ಸೂಚಿಸಲಾಗಿದೆ.

ಈ ಸಂಬಂಧ, ರಾಜ್ಯದ ಎಲ್ಲಾ ಸರ್ಕಾರಿ/ ಖಾಸಗಿ ಅನುದಾನಿತ/ ಖಾಸಗಿ ಅನುದಾನ ರಹಿತ ಕಾಲೇಜುಗಳಲ್ಲಿ **ದಿನಾಂಕ:26.11.2021 "ಸಂವಿಧಾನ ದಿನ"** ದಂದು ಸಂವಿಧಾನದ ಪ್ರಸ್ತಾವನೆಯನ್ನು ಕಡ್ಡಾಯವಾಗಿ ಓದುವಂತೆ ಹಾಗೂ ಸಂವಿಧಾನದ ಬಗ್ಗೆ ಸಾರ್ವಜನಿಕವಾಗಿ ಅರಿವು ಮೂಡಿಸುವಂತಹ ಅತ್ಯುತ್ತಮ ಕಾರ್ಯಕ್ರಮಗಳನ್ನು **ಕೋವಿಡ್-19 ರ ಮಾರ್ಗಸೂಚಿಗಳನ್ನು ಅನುಸರಿಸಿ ಸಾಮಾಜಿಕ ಅಂತರವನ್ನು ಕಾಪಾಡಿಕೊಂಡು** ಆಚರಿಸಲು ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಸೂಚಿಸಲಾಗಿದೆ.

R. Nagesha
ಕಾಲೇಜು ಶಿಕ್ಷಣ ಹೆಚ್ಚುವರಿ ನಿರ್ದೇಶಕರು

ಇವರಿಗೆ: - ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ

1) ರಾಜ್ಯದ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ..
2) ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಗುಲ್ಬರ್ಗಾ.
3) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು. - ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಲಾಗಿದೆ.

ಪ್ರತಿ;

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತಶಾಖೆಗೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-01.
2) ಕಛೇರಿ ಪ್ರತಿ.